## ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 30-04-2015ರ ನಡವಳಿಗಳು

### ವಿಷಯದ ಸಂಖ್ಯೆ : 57 / 2015-16

ವಿಷಯ: ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು 2015-16ನೇ ಸಾಲಿನಲ್ಲಿ ಸರ್ಕಾರಿ ನೌಕರರ ವರ್ಗಾವಣೆಯ ಬಗ್ಗೆ ಹೊರಡಿಸಿರುವ ಮಾರ್ಗಸೂಚಿಗಳನ್ನು ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಬಗ್ಗೆ.

**ಪ್ರಸ್ತಾವನೆ:**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು 2015-16ನೇ ಸಾಲಿನಲ್ಲಿ ಸರ್ಕಾರಿ ನೌಕರರ ವರ್ಗಾವಣೆಯ ಬಗ್ಗೆ ಹೊರಡಿಸಿರುವ ಮಾರ್ಗಸೂಚಿಗಳ ನಡವಳಿ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ:07-06-2013 ಮತ್ತು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ದಿನಾಂಕ:06-02-2014ರ ಆದೇಶಗಳಲ್ಲಿ ನಮೂದಿಸಿರುವ ಷರತ್ತುಗಳೊಂದಿಗೆ ಸರ್ಕಾರಿ ನೌಕರರ ವರ್ಗಾವಣೆಗಳನ್ನು ದಿನಾಂಕ:02-05-2015 ರೊಳಗೆ ಪೂರ್ಣಗೊಳಿಸಲು ಆದೇಶಿಸಲಾಗಿರುತ್ತದೆ.

ಮೇಲ್ಕಂಡ ಸರ್ಕಾರದ ನಡವಳಿ ಆದೇಶದಲ್ಲಿ 2015-16ನೇ ಸಾಲಿನಲ್ಲಿ ಸರ್ಕಾರಿ ನೌಕರರ ವರ್ಗಾವಣೆಯನ್ನು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 22 ಸೇನೌವ 2013, ದಿನಾಂಕ:07-06-2013 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ದಿನಾಂಕ:06-09-2014ರ ಆದೇಶಗಳಲ್ಲಿ ನಮೂದಿಸಿರುವ ಷರತ್ತುಗಳೊಂದಿಗೆ ಸರ್ಕಾರಿ ನೌಕರರ ವರ್ಗಾವಣೆಗಳನ್ನು ದಿನಾಂಕ:02-05-2015ರೊಳಗೆ ಪೂರ್ಣಗೊಳಿಸಲು ಆದೇಶಿಸಲಾಗಿರುವಂತೆ, ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 22 ಸೇನೌವ 2013, ದಿನಾಂಕ:07-06-2013ರಲ್ಲಿ ವರ್ಗಾವಣೆಗೆ ಸಂಬಂಧಿಸಿದಂತೆ ಷರತ್ತುಗಳನ್ನು ವಿಧಿಸಲಾಗಿರುತ್ತದೆ.

ಮೇಲ್ಕಂಡಂತೆ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು 2015-16ನೇ ಸಾಲಿನಲ್ಲಿ ಸರ್ಕಾರಿ ನೌಕರರನ್ನು ವರ್ಗಾವಣೆ ಮಾಡಲು ದಿನಾಂಕ: 20-04-2015 ರಂದು ಹೊರಡಿಸಿರುವ ನಡವಳಿಯ ಮಾರ್ಗಸೂಚಿಗಳ ನಡವಳಿಯಲ್ಲಿ ಉಲ್ಲೇಖಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 22 ಸೇನೌವ 2013, ದಿನಾಂಕ:07-06-2013 ಮತ್ತು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 18 ಸೇನೌವ 2014, ದಿನಾಂಕ:06-02-2014ರ ನಡವಳಿಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿ / ನೌಕರರುಗಳಿಗೆ ಅನ್ವಯವಾಗುವಂತೆ ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಬಗ್ಗೆ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:27-04-2015ರ ಟಿಪ್ಪಣಿ.

<u>ತೀರ್ಮಾನ</u>: **"**ಸರ್ಕಾರದ ದಿನಾಂಕ:20-04-2015ರ ಆದೇಶದಲ್ಲಿನ ಮಾರ್ಗಸೂಚಿಗಳನ್ನು ಯಥಾವತ್ತಾಗಿ ಅನುಸರಿಸಲು ಅನುಮೋದಿಸಿದೆ**"**.

(ಟಿ.ಎಂ.ವಿಜಯಭಾಸ್ಕರ್)
ಆಡಳಿತಗಾರರು